**ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಪ್ರ.ದ.ನ್ಯಾಯಿಕ ದಂಡಾಧಿಕಾರಿಗಳರವರ ನ್ಯಾಯಾಲಯ, ಹೆಚ್.ಡಿ.ಕೋಟೆ**

**ಸಿ.ಸಿ. ನಂ. 4568/2022**

**ಸಾಕ್ಷಿಗೆ ದಿನಾಂಕ 12.8 .2024 ರಂದು ಪ್ರಮಾಣವಚನ ಬೋಧಿಸಲಾಯಿತು.**

| | | | |
|---|---|---|---|
| ಸಾಕ್ಷಿದಾರರ ಹೆಸರು | : | ಕೃಷ್ಣ | ಪಿ.ಡಬ್ಲ್ಯೂ-1 |
| ತಂದೆಯ/ಗಂಡನ ಹೆಸರು | : | ಶಂಕರನಾಯಕ | ಸಿ.ಡಬ್ಲ್ಯೂ-1 |
| ವಯಸ್ಸು | : | 33 | |
| ಉದ್ಯೋಗ | : | ಕೂಲಿ | |
| ವಾಸಸ್ಥಳ | : | ಆಗತ್ತೂರು | |

**ಮುಖ್ಯ ವಿಚಾರಣೆಃ ಸಹಾಯಕ ಸರ್ಕಾರಿ ಅಭಿಯೋಜಕರವರಿಂದಃ**

ನ್ಯಾಯಾಲಯದ ಮುಂದಿರುವ ಆರೋಪಿಯನ್ನು ನೋಡಿರುತ್ತೇನೆ. ನನಗೆ ಸಂಬಂಧಪಟ್ಟ ಮನೆಯು ಆಗತ್ತೂರು ಗ್ರಾಮದಲ್ಲಿದ್ದು, ಮನೆಯ ಒಳಗಿನ ಬೀರುವಿನಲ್ಲಿ 4 ಗ್ರಾಂ ಚಿನ್ನದ ಉಂಗುರ, 5 ಗ್ರಾಂ ತೂಕದ ಇನ್ನೊಂದು ಚಿನ್ನದ ಉಂಗುರ, 7 ಗ್ರಾಂ ತೂಕದ ನನ್ನ ಹೆಂಡತಿಗೆ ಸಂಬಂಧಪಟ್ಟ ಹ್ಯಾಂಗಿಂಗ್ಸ್, ನನ್ನ ಮಗುವಿಗೆ ಸಂಬಂಧಪಟ್ಟ ತಲಾ 1 ಗ್ರಾಂ ತೂಕದ ಎರಡು ಚಿನ್ನದ ಉಂಗುರ ಹಾಗೂ 35 ಸಾವಿರ ಹಣವನ್ನು ಇಟ್ಟಿದ್ದೆನು. ದಿನಾಂಕ 16.8.2021 ರಂದು ಸಂಜೆ 6 ಗಂಟೆಗೆ ನಾನು ಮತ್ತು ನನ್ನ ಹೆಂಡತಿ ಮಕ್ಕಳನ್ನು ಕರೆದುಕೊಂಡು ಮನೆಗೆ ಬೀಗ ಹಾಕಿ ಸಾಗರೆಯಲ್ಲಿರುವ ನನ್ನ ಅಣ್ಣನ ಮನೆಗೆ ಹೋಗಿರುತ್ತೇವೆ. ಮರುದಿನ ಬೆಳಿಗ್ಗೆ 9 ಗಂಟೆಗೆ ಮನೆಗೆ ವಾಪಸ್ಸು ಬಂದು ಸ್ನಾನ ಮಾಡಿ ಪುನಃ ಸಾಗರೆ ಗ್ರಾಮಕ್ಕೆ ಹೋಗಿರುತ್ತೇನೆ. ಅಲ್ಲಿ ನನ್ನ ಮನೆಯ ಬೀಗ ಕಳೆದು ಹೋಗಿರುತ್ತದೆ. ಬೀಗ ಕಳೆದು ಹೋಗಿದ್ದರಿಂದ ನಾನು ಮತ್ತು ನನ್ನ ಹೆಂಡತಿ ನನ್ನ ಅಣ್ಣನ ಮನೆಯಲ್ಲಿದ್ದೆವು. ನಂತರ ದಿನಾಂಕ 20.8.2021 ರಂದು ಬೆಳಿಗ್ಗೆ 11 ಗಂಟೆಗೆ ಪುನಃ ನಮ್ಮ ಮನೆಗೆ ವಾಪಸ್ ಬಂದಿದ್ದು ನನ್ನ ಹೆಂಡತಿಯ ಬಳಿ ಮನೆಯ ಇನ್ನೊಂದು ಬೀಗದ ಕೀ ಇದ್ದು, ಬೀಗವನ್ನು ತೆಗೆದು ಮನೆ ಒಳಗೆ ಹೋಗಿ ನೋಡಿದಾಗ ಮನೆಯ ಬೀರುವಿನಲ್ಲಿಟ್ಟಿದ್ದ ಚಿನ್ನ ಮತ್ತು ನಗದು ಹಣ ಯಾರೋ ಕಳ್ಳತನ ಮಾಡಿಕೊಂಡು ಹೋಗಿರುತ್ತಾರೆ. ಈ ಹಿಂದೆ ಕಳೆದು ಹೋಗಿದ್ದ ಕೀ ಸಹಾಯದಿಂದ ಬಾಗಿಲನ್ನು ತೆಗೆದು ಮನೆಯ ಬೀರುವಿನಲ್ಲಿಟ್ಟಿದ್ದ ಮೇಲೆ ಹೇಳಿದ ವಸ್ತುಗಳನ್ನು ಯಾರೋ ಕಳ್ಳತನ ಮಾಡಿಕೊಂಡು ಹೋಗಿದ್ದರು. ನಂತರ ನಾನು ಅಕ್ಕಪಕ್ಕದವರನ್ನು ವಿಚಾರಿಸಿ ಮದ್ಯಾಹ್ನ 3 ಗಂಟೆಗೆ ಠಾಣೆಗೆ ಹೋಗಿ ದೂರನ್ನು ನೀಡಿರುತ್ತೇನೆ. ಸಾಕ್ಷಿದಾರರು ದೂರನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ1 ಎಂದು, ಸಾಕ್ಷಿಯ

ಸಹಿಯನ್ನು ನಿಪಿ1 ಎ ಎಂದು ಗುರುತಿಸಲಾಯಿತು. ನಾನು ದೂರು ನೀಡಿದ ಅದೇ ದಿನ ಸರಗೂರು ಪೋಲಿಸರು ನಮ್ಮ ಮನೆಗೆ ಸಂಜೆ 4.30 ಕ್ಕೆ ಭೇಟಿ ನಾನು ತೋರಿಸಿದ ಘಟನಾ ಸ್ಥಳವನ್ನು ಪರಿಶೀಲಿಸಿ ಪಂಚರಾದ ಚಾಸ2 ಮತ್ತು 3 ರವರ ಸಮಕ್ಷಮ ಸ್ಥಳ ಮಹಜರನ್ನು ಮಾಡಿರುತ್ತಾರೆ. ಸಾಕ್ಷಿದಾರರು ಸ್ಥಳ ಮಹಜರನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ2 ಎಂದು, ಸಾಕ್ಷಿಯ ಸಹಿಯನ್ನು ನಿಪಿ2 ಎ ಎಂದು ಗುರುತಿಸಲಾಯಿತು. ನಾನು ದೂರು ನೀಡಿದ 1 ತಿಂಗಳ ನಂತರ ನನ್ನನ್ನು ಸರಗೂರು ಠಾಣೆಗೆ ಕರಸಿದ್ದು ಅಲ್ಲಿ ಕಳ್ಳತನ ಮಾಡಿದ ಚಿನ್ನದ ಆಭರಣ ಮತ್ತು ನ್ಯಾಯಾಲಯದ ಮುಂದಿರುವ ಆರೋಪಿಯನ್ನು ತೋರಿಸಿರುತ್ತಾರೆ. ನಾನು ಕಳ್ಳತನವಾಗಿದ್ದ ಚಿನ್ನದ ಆಭರಣಗಳನ್ನು ನೋಡಿ ಗುರುತಿಸಿರುತ್ತೇನೆ. ನಂತರ ನ್ಯಾಯಾಲಯದ ಆದೇಶದಂತೆ ಸದರಿ ಚಿನ್ನದ ಆಭರಣಗಳನ್ನು ನನ್ನ ವಶಕ್ಕೆ ಪಡೆದುಕೊಂಡಿರುತ್ತೇನೆ. ಸದರಿ ಚಿನ್ನದ ಆಭರಣಗಳನ್ನು ನಾನು ಮುತ್ತೂಟ್ ಪೈನಾನ್ಸನಲ್ಲಿ ಗಿರವಿ ಇಟ್ಟಿರುತ್ತೇನೆ.

ಈ ಹಂತದಲ್ಲಿ ಮುಂದುವರೆದ ಮುಖ್ಯ ವಿಚಾರಣೆಗೆ ಸಮಯ ಕೋರಿದ್ದು ಸಮಯ ನೀಡಲಾಯಿತು.

(ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸಾ ಸ ಇ ಒ.,

ಹಿರಿಯ ಸಿ.ಜೆ ಮತ್ತು ಜೆ.ಎಂ.ಎಫ್.ಸಿ.,
ಹೆಚ್.ಡಿ.ಕೋಟೆ